ಮಾಡುವುದಕ್ಕೆ ಇಲಾಖೆ ವತಿಯಿಂದ ತೀರ್ಮಾನ ತೆಗೆದುಕೊಂಡಿದ್ದೇವೆ. ಆದಷ್ಟು ಬೇಗ ಕೆಲಸವನ್ನು ಪ್ರಾರಂಭ ಮಾಡುತ್ತೇವೆ. ಈ 9 ಕಾಮಗಾರಿಗಳನ್ನು ಹಿಂದೆ ತೆಗೆದುಕೊಂಡು ನಿಂತಿದೆವೆಯೋ ಅದರ ಜೊತೆಗೆ ಮತ್ತೆ 31 ಸೇರಿಸಿ ಒಟ್ಟು 40 ಕಟ್ಟಡಗಳನ್ನು ನಿರ್ಮಾಣ ಮಾಡುವುದಕ್ಕಾಗಿ ಅನುಮತಿ ನೀಡಲು ಕೇಂದ್ರ ಸರ್ಕಾರಕ್ಕೆ ಕಳುಹಿಸಿಕೊಟ್ಟಿದ್ದೇವೆ.

ಶ್ರೀ ಬಿ.ಎಸ್. ಯಡಿಯೂರಪ್ಪ:– ಮಾನ್ಯ ಅಧ್ಯಕ್ಷರೆ, ಇದಕ್ಕೇನು ನನ್ನ ಅಭ್ಯಂತರವಿಲ್ಲ. ಮತ್ತೆ ಇದರ ಬಗ್ಗೆ ಬಹಳ ಚರ್ಚೆ ಮಾಡುವುದಕ್ಕೆ ಇಷ್ಟಪಡುವುದಿಲ್ಲ. ಆದರೆ, ನಾಗಾರ್ಜುನ ಕನ್ಸ್‌ಟ್ರಕ್ಷನ್ ರವರಿಗೆ ಈ ಕೆಲಸವನ್ನು ಎಂಟ್ರಸ್ಟ್ ಮಾಡಿದ ನಂತರ ಸಂಬಂಧಪಟ್ಟಂಥ ಗುತ್ತಿಗೆದಾರ ಅಲ್ಲಿಗೆ ಬಂದು ಮಾರ್ಕಿಂಗ್ ಮಾಡಿ ನಬಾರ್ಡ್‌ನಿಂದ ಇದಕ್ಕೆ ಹಣ ಬರಲಿಲ್ಲವೆಂಬ ಕಾರಣಕ್ಕಾಗಿ ಅಲ್ಲಿ ಕೆಲಸ ಪ್ರಾರಂಭ ಮಾಡಿಲ್ಲ. ದಿನಾಂಕ 17–11–2003ರ ಪಟ್ಟಿಯಲ್ಲಿ ಮಳವಳ್ಳಿ ಸೇರಿರಲಿಲ್ಲವೆಂದು ಹೇಳಿದ್ದೀರಿ. ಆದರೆ, ಈ ಸಂದರ್ಭದಲ್ಲಿ ನಾನು ಹೇಳುವುದೇನೆಂದರೆ, ಇದು ಪಟ್ಟಿಯಲ್ಲಿ ಸೇರಿದ್ದರಿಂದಲೇ ಅನುಮತಿ ಸಿಕ್ಕಿತು. ಅನುಮತಿ ಸಿಕ್ಕಿದ ನಂತರವೆ ಟೆಂಡರ್ ಕರೆಯಲಾಗಿದೆ. ಕೆಲಸ ಪ್ರಾರಂಭವಾದ ಮೇಲೆ ಕೈ ಬಿಟ್ಟು ಹೋಯಿತೆಂದರೆ ಹೇಗೆ? ಈ ರೀತಿಯಾಗಬಾರದಲ್ಲವೆ? ಈಗ 9ರ ಜೊತೆಯಲ್ಲಿ ಇದನ್ನು ತೆಗೆದುಕೊಂಡು ಮಾಡಿ ಮುಗಿಸುತ್ತೇವೆಂದು ತಾವು ಹೇಳಿದ್ದೀರಿ. ಆದ್ದರಿಂದ ಕೊನೇಪಕ್ಷ ಮುಂದಿನ ತಿಂಗಳಲ್ಲಿ ಈ ಕೆಲಸವನ್ನು ಪ್ರಾರಂಭ ಮಾಡಿ ನಾನು ಗೌರವದಿಂದ ಅಲ್ಲಿ ಓಡಾಡುವಂತೆಯಾದರು ಮಾಡಿ.

ಶ್ರೀ ಎನ್. ಚೆಲುವರಾಯಸ್ವಾಮಿ: ಮಾನ್ಯ ಅಧ್ಯಕ್ಷರೆ, ಈ ಸಾರಿ ಯಾವುದೇ ರೀತಿಯ ವ್ಯತ್ಯಾಸವಾಗುವುದಿಲ್ಲ. ಈಗಾಗಲೇ ಮಂಜೂರಾತಿಗಾಗಿ ಕಳುಹಿಸಿಕೊಟ್ಟಿದ್ದೇವೆ. ಅಲ್ಲಿಂದ ಅನುಮತಿ ಬಂದ ತಕ್ಷಣವೇ ಕೆಲಸ ಪ್ರಾರಂಭ ಮಾಡುತ್ತೇವೆ.

ಅಧ್ಯಕ್ಷರು: ಮಾನ್ಯ ಜಗದೀಶ್ ಶೆಟ್ಟರ್ ರವರೆ, ತಮ್ಮ ವಿಷಯದ ಬಗ್ಗೆ ಸರ್ಕಾರದ ಗಮನ ಸೆಳೆಯಿರಿ.

ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮಾಂತರ): ಮಾನ್ಯ ಅಧ್ಯಕ್ಷರೆ, ಈ ಒಂದು ಕಳಸಾ ಬಂಡೂರಿ ನಾಲಾ ಯೋಜನೆಯನ್ನು ಮಲಪ್ರಭಾ ನದಿಗೆ ಜೋಡಣೆ ಮಾಡತಕ್ಕಂಥದ್ದು ಮತ್ತು ಇದರಿಂದ ಹುಬ್ಬಳ್ಳಿ–ಧಾರವಾಡ

ಮಹಾನಗರಕ್ಕೆ ಕುಡಿಯುವ ನೀರನ್ನು ಪೂರೈಕೆಯಿಂದ ಕುಡಿಯುವ ನೀರಿನ ಸಮಸ್ಯೆ ನಿವಾರಣೆಯಾಗುವುದರ ಜೊತೆಗೆ ಆ ಭಾಗದ ರೈತರಿಗೆ ನೀರಾವರಿ ಸೌಲಭ್ಯ ಕಲ್ಪಿಸಿಕೊಡುವುದಕ್ಕಾಗಿ ಉಪಯುಕ್ತವಾಗಿರತಕ್ಕಂಥ ಕಳಸಾ ಬಂಡೂರಿ ನಾಲೆ ಯೋಜನೆ ಬಗ್ಗೆ ಏನು ತಡೆಯಾಜ್ಞೆ ಇದೆ. ಅದನ್ನು ತೆರವುಗೊಳಿಸುವುದ ಕ್ಕೋಸ್ಕರ ಕೇಂದ್ರ ಸರ್ಕಾರದ ಮೇಲೆ ಒತ್ತಡ ತಂದು ಆ ತಡೆಯಾಜ್ಞೆಯನ್ನು ತೆರವುಗೊಳಿಸಬೇಕೆಂದು ಆಗ್ರಹಪಡಿಸುವುದಕ್ಕಾಗಿ ಈ ಒಂದು ಗಮನ ಸೆಳೆಯುವ ಸೂಚನೆಯನ್ನು ನಾನು ಕೊಟ್ಟಿದ್ದೇನೆ. ಇದಕ್ಕೆ ಸರ್ಕಾರ ದಯವಿಟ್ಟು ಉತ್ತರ ಕೊಡಬೇಕೆಂದು ನಾನು ವಿನಂತಿ ಮಾಡಿಕೊಳ್ಳುತ್ತೇನೆ.

ಶ್ರೀ ಪಿ.ಜಿ.ಆರ್. ಸಿಂಧ್ಯಾ: ಮಾನ್ಯ ಅಧ್ಯಕ್ಷರೆ, ಮಾನ್ಯ ನೀರಾವರಿ ಸಚಿವರು ಈಗ ಬರುತ್ತಾರೆ. ಆದ್ದರಿಂದ, ಅವರು ಬಂದ ಮೇಲೆ ಇದನ್ನು ತೆಗೆದುಕೊಳ್ಳಿ.

ಶ್ರೀ ಜಗದೀಶ್ ಶೆಟ್ಟರ್: ಈ ಗಮನ ಸೆಳೆಯುವ ಸೂಚನೆಯನ್ನು ನಾನು ಮತ್ತು ಮಾನ್ಯ ಸಿ.ಸಿ.ಪಾಟೀಲ್‌ರವರು ಸೇರಿಸಿ ಕೊಟ್ಟಿದ್ದೇವೆ.

ಅಧ್ಯಕ್ಷರು: ನೀರಾವರಿ ಸಚಿವರು ಇಲ್ಲ. ಅವರು ಬಂದನಂತರ ಇದನ್ನು ತೆಗೆದುಕೊಳ್ಳುತ್ತೇನೆ.

ಶ್ರೀ ಜಗದೀಶ್ ಶೆಟ್ಟರ್:– ಆಯಿತು.

ಅಧ್ಯಕ್ಷರು: ಮಾನ್ಯ ಯಡಿಯೂರಪ್ಪನವರೆ, ತಾವು ಕೇಷಿಪ್ ಮೂಲಕ ಸಿ.ಆರ್.ಎಫ್. ಯೋಜನೆ ಬಗ್ಗೆ ಕೇಳಿದ್ದೀರಿ. ಇದನ್ನು ಗಮನ ಸೆಳೆಯುವ ಸೂಚನೆಗೆ ಕನ್ವರ್ಟ್ ಮಾಡೋಣ. ತಾವು ಇದರ ಬಗ್ಗೆ ಸರ್ಕಾರದ ಗಮನ ಸೆಳೆಯಿರಿ.

ಶ್ರೀ ಬಿ.ಎಸ್. ಯಡಿಯೂರಪ್ಪ(ವಿರೋಧಪಕ್ಷದ ನಾಯಕರು): ಮಾನ್ಯ ಅಧ್ಯಕ್ಷರೆ ರಾಜ್ಯದಲ್ಲಿ ವಿಶ್ವಬ್ಯಾಂಕ್ ಅಡಿಯಲ್ಲಿ ಕೇಷಿಪ್ ಮೂಲಕ ಸಿ.ಆರ್.ಎಫ್. ಯೋಜನೆಯಡಿಯಲ್ಲಿ ಹಾಗೂ ಕೆ.ಆರ್.ಡಿ.ಸಿ.ಎಲ್. ವತಿಯಿಂದ ಕಾಮಗಾರಿ ಕೈಗೆತ್ತಿಕೊಳ್ಳಲು ಅನುಸರಿಸುತ್ತಿರುವ ಮಾನದಂಡ ಹಾಗೂ ಈ ಬಗ್ಗೆ ಅನೇಕ ಲೋಪದೋಷಗಳು ಕಂಡು ಬಂದಿರತಕ್ಕಂಥದ್ದರ ಬಗ್ಗೆ ನಾನು ಮತ್ತು ಮಾನ್ಯ ಸಿ.ಟಿ.ರವಿ, ಮಾನ್ಯ ವಿ. ಸುನೀಲ್ ಕುಮಾರ್ ಹಾಗೂ ಮಾನ್ಯ ಬಿ. ನಾಗರಾಜ್ ಶೆಟ್ಟಿ, ನಾವೆಲ್ಲರೂ ಸೇರಿ ಈ ವಿಷಯದ ಬಗ್ಗೆ ಮಾನ್ಯ ಲೋಕೋಪಯೋಗಿ ಇಲಾಖೆಯ ಸಚಿವರ ಗಮನ ಸೆಳೆಯುತ್ತೇವೆ.